# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1257**

ಸದಸ್ಯರ ಹೆಸರು : ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 22-08-2025.

ಉತ್ತರಿಸುವ ಸಚಿವರು : ಕೃಷಿ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿರುವ ಅರಣ್ಯ ಶಾಸ್ತ್ರದ (BSc forestry) ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಮತ್ತು ಅವುಗಳು ಯಾವುವು; ಈ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರ ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಅರಣ್ಯ ಶಾಸ್ತ್ರದ (BSc forestry) 03 ಪದವಿ ಕಾಲೇಜುಗಳಿರುತ್ತವೆ. ಅರಣ್ಯ ಪದವಿ ಕಾಲೇಜುಗಳ ವಿವರ ಹಾಗೂ ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಬೋಧಕ-ಬೋಧಕೇತರ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ;<br><br>(1) ಅರಣ್ಯ ಮಹಾವಿದ್ಯಾಲಯ, ಪೊನ್ನಂಪೇಟೆ, ಕೊಡಗು ಜಿಲ್ಲೆ. ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳು-25, ಬೋಧಕೇತರ ಸಿಬ್ಬಂದಿ-09<br><br>(2) ಅರಣ್ಯ ಮಹಾವಿದ್ಯಾಲಯ, ಶಿರಸಿ, ಉತ್ತರ ಕನ್ನಡ ಜಿಲ್ಲೆ. ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳು-14, ಬೋಧಕೇತರ ಸಿಬ್ಬಂದಿ-16<br><br>(3) ಕೃಷಿ ವಿಜ್ಞಾನಗಳ ಮಹಾವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ ಜಿಲ್ಲೆ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳು-10, ಬೋಧಕೇತರ ಸಿಬ್ಬಂದಿ-6 |
| ಆ. | ಸದರಿ ಕಾಲೇಜಿನಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇದರಲ್ಲಿ ಬಾಲಕ/ಬಾಲಕಿಯರಿಗೆ ಅವಕಾಶ ನೀಡಲಾಗಿದೆಯೇ; | ರಾಜ್ಯದಲ್ಲಿರುವ ಮೂರು ಅರಣ್ಯ ಮಹಾವಿದ್ಯಾಲಯಗಳಲ್ಲಿ ಸಿಇಟಿ, ಐಸಿಎಆರ್ ಮತ್ತು ಎನ್ಆರ್ಐ ಕೋಟಾಗಳಡಿ ಬಾಲಕ ಮತ್ತು ಬಾಲಕಿಯರಿಗೆ ಪ್ರವೇಶಾತಿ ನೀಡಲಾಗುತ್ತಿದೆ. ಮೂರು ಮಹಾವಿದ್ಯಾಲಯಗಳಲ್ಲಿ 412 ಬಾಲಕರು ಹಾಗೂ 249 ಬಾಲಕೀಯರು ಸೇರಿದಂತೆ ಒಟ್ಟು 661 ವಿದ್ಯಾರ್ಥಿಗಳ ಅಧ್ಯಯನಕ್ಕೆ ಅವಕಾಶ ಕಲ್ಪಿಸಲಾಗಿದೆ. |
| ಇ | ಈ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳಿಗೆ ಸರ್ಕಾರದಿಂದಲೇ ವಸತಿ ಹಾಗೂ ಊಟದ ಸೌಕರ್ಯದ ವ್ಯವಸ್ಥೆ ಮಾಡಲಾಗಿದೆಯೇ; ಇಲ್ಲವಾದಲ್ಲಿ ಸೌಕರ್ಯವನ್ನು ನೀಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; | ಅರಣ್ಯ ಮಹಾವಿದ್ಯಾಲಯಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿಗಳಿಗೆ ಪಾವತಿಯ ಆಧಾರದ ಮೇರೆಗೆ ವಸತಿ ಮತ್ತು ಊಟದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ವ್ಯವಸ್ಥೆಯನ್ನು ಒದಗಿಸಲಾಗಿರುತ್ತದೆ. |
| ಈ | ಚಾಮರಾಜನಗರ, ಮೈಸೂರು, ಹಾಸನ, ಮಂಡ್ಯ ಜಿಲ್ಲೆಗಳಲ್ಲಿ ಹೆಚ್ಚಿನ ರೀತಿಯಲ್ಲಿ ಕಾಡು ಪ್ರದೇಶ ಇರುವುದರಿಂದ ಅರಣ್ಯ ಶಾಸ್ತ್ರದ ಕಾಲೇಜನ್ನು ಮೈಸೂರಿನಲ್ಲಿ ಪ್ರಾರಂಭಿಸುವ ಯೋಜನೆ ಸರ್ಕಾರಕ್ಕೆ ಇದೆಯೇ; ಇದ್ದರೆ ಈ ಕಾಲೇಜು ಯಾವ ಸಾಲಿನಲ್ಲಿ ತೆರೆಯಲಾಗುವುದು? | ಪ್ರಸ್ತುತ ಮೈಸೂರಿನಲ್ಲಿ ಅರಣ್ಯ ಮಹಾವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

AGRI 54 AUM 2025.

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು